ಆ) ಸದರಿ ರಸ್ತೆಯಲ್ಲಿ ದಿನನಿತ್ಯ ಸಾವಿರಾರು ಜನರು ಹಾಗೂ ವಾಹನಗಳು ಓಡಾಡುತ್ತಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಸದರಿ ರಸ್ತೆಯನ್ನು ದುರಸ್ಥಿಗೊಳಿಸಿ ಡಾಂಬರೀಕರಣಗೊಳಿಸಲು ಯಾವ ಕ್ರಮವನ್ನು ಕೈಗೊಳ್ಳಲಾಗುವುದು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಹೌದು.

ಇ) ನಗರ ಸಭೆಯ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು.

ಹೊರ ವರ್ತುಲ ರಸ್ತೆಯ ಡಾಂಬರೀಕರಣದ ಬಗ್ಗೆ

5 (20) : ಶ್ರೀ ಆರ್. ಅಶೋಕ್, ಎಂ.ಎಲ್.ಎ (ಉತ್ತರಹಳ್ಳಿ) ಮಾನ್ಯ ಬೆಂಗಳೂರು ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಂಠೀರವ ಸ್ಟುಡಿಯೋದ ಹತ್ತಿರ ಹಾದು ಹೋಗುವ ಹೊರ ವರ್ತುಲ ರಸ್ತೆಯಿಂದ ಸುಭಾಷ್ ಚಂದ್ರ ಬೋಸ್ ವೃತ್ತದಿಂದ ಆರಂಭವಾಗಿ ಜಾಲಹಳ್ಳಿ ಕ್ರಾಸ್‌ಗೆ ಅಂದರೆ ಎನ್.ಹೆಚ್-4 ಗೆ ಸೇರುವ ರಸ್ತೆಯ ಡಾಂಬರೀಕರಣಕ್ಕೆ ಈ ಹಿಂದೆ ಸುಮಾರು ರೂ. 20 ಲಕ್ಷ ರೂಪಾಯಿಗಳನ್ನು ಮಂಜೂರು ಮಾಡಿದ್ದರೂ ರಸ್ತೆಯು ಪೂರ್ತಿ ಡಾಂಬರೀಕರಣ ವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ರಸ್ತೆಯ ಪೂರ್ಣ ಡಾಂಬರೀಕರಣವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ರಾಮಲಿಂಗರೆಡ್ಡಿ (ಬೆಂಗಳೂರು ಅಭಿವೃದ್ಧಿ ಸಚಿವರು) :

ಅ) ಕಂಠೀರವ ಸ್ಟುಡಿಯೋ ಹತ್ತಿರದ ವರ್ತುಲ ರಸ್ತೆಯಿಂದ (ಸುಭಾಷ್‌ಚಂದ್ರಭೋಸ್ ವೃತ್ತ) ಜಾಲಹಳ್ಳಿ ವೃತ್ತದವರೆಗೆ (ಎನ್.ಹೆಚ್-4) ಜೋಡಿ ರಸ್ತೆಯ ಉದ್ದ 3.20 ಕಿ.ಮೀ. ಗಳು ಇದರಲ್ಲಿ ವರ್ತುಲ ರಸ್ತೆಯಿಂದ ಲಗ್ಗೆರೆ ಮುಖ್ಯ ರಸ್ತೆಯವರೆಗೆ 1.30 ಕಿ.ಮೀ. ಜೋಡಿ ರಸ್ತೆಗೆ ಡಾಂಬರೀಕರಣ ಮಾಡಲು ಒಟ್ಟು 33.00 ಲಕ್ಷ ರೂ.ಗಳಿಗೆ ಅಂದಾಜುಗಳು ಮಂಜೂರಾಗಿದ್ದು, ಈ ಕೆಲಸವನ್ನು ಮಾಡಿ ಮುಗಿಸಲಾಗಿದೆ.

ಆ) ಉಳಿದ ಭಾಗದ ರಸ್ತೆ ಅಂದರೆ ಲಗ್ಗೆರೆ ಮುಖ್ಯ ರಸ್ತೆಯಿಂದ ಜಾಲಹಳ್ಳಿ ವೃತ್ತದವರೆಗೆ 1.90 ಕಿ.ಮೀ. ಉದ್ದದ ರಸ್ತೆಯನ್ನು ಡಾಂಬರೀಕರಣ ಮಾಡಲು ಮುಂದಿನ ವರ್ಷದ ಅನುದಾನದಲ್ಲಿ ಅಳವಡಿಸಿಕೊಂಡು ಕಾರ್ಯಗತಗೊಳಿಸಲು ಕ್ರಮ ಜರುಗಿಸಲಾಗುವುದು.

ರಾಜ್ಯದಲ್ಲಿ ಜಾರಿಗೆ ಬಂದಿರುವ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯ ನ್ಯೂನತೆಗಳ ಬಗ್ಗೆ

6 (183) : ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಜಾರಿಗೆ ತರಲಾಗಿರುವ ಸ್ವಯಂ ಘೋಷಿತ ಆಸ್ತಿತೆರಿಗೆ ಪದ್ಧತಿಯಲ್ಲಿ ಆಸ್ತಿಯ ಮೌಲ್ಯಮಾಪನ ಹಾಗೂ ತೆರಿಗೆ ನಿರ್ಧಾರ ಮಾಡುವ ಪದ್ಧತಿಯಲ್ಲಿ ಅನೇಕ ಅವೈಜ್ಞಾನಿಕ ಅಂಶಗಳು; ವೈರುಧ್ಯಮಗಳು ಮತ್ತು ನ್ಯೂನತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದಾಗಿ, ಸಾರ್ವಜನಿಕರು, ಆತಂಕಕ್ಕೆ ಒಳಗಾಗಿರುವುದನ್ನು ಸರ್ಕಾರವು ಮನಗಂಡಿದೆಯೇ;

ಇ) ಸೆಕ್ಷನ್ 45 (ಬಿ) ಅನ್ನು ಪರಿಷ್ಕರಿಸಿ ವೈಜ್ಞಾನಿಕವಾಗಿ ಆಸ್ತಿ ಮೌಲ್ಯ ಮತ್ತು ತೆರಿಗೆ ನಿರ್ಧಾರಿಸುವ ಪದ್ಧತಿಯನ್ನು ರಾಜ್ಯದ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಜಾರಿಗೆ ತರಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಬಂದಿದೆ.

ಆ) ಹೌದು.

ಇ) ಈಗಾಗಲೇ ಕಂದಾಯ ಇಲಾಖೆಯಲ್ಲಿ ಕರ್ನಾಟಕ ಮುದ್ರಾಂಕ ಕಾಯ್ದೆ ಕಲಂ 45ಬಿ ರನ್ವಯ 2004-05 ನೇ ಸಾಲಿನ ಆಸ್ತಿ ಮೌಲ್ಯ ನಿರ್ಧರಿಸಲು ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

ರಾಜ್ಯದಲ್ಲಿ ಕೃಷಿ ನೀರಾವರಿ ಸೌಲಭ್ಯಕ್ಕಾಗಿ ಬಳಸುವ ಐ.ಪಿ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಬಗ್ಗೆ

8 (185) : ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೃಷಿಗಾಗಿ ಉಪಯೋಗಿಸುವ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು, ಕೃಷಿಕರಿಂದ ಅರ್ಜಿಗಳನ್ನು ಸ್ವೀಕರಿಸುತ್ತಾ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೃಷಿಯ ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡಲು ನಿರ್ಬಂಧ ಇದೆಯೇ;

ಆ) ಕೃಷಿಯಲ್ಲಿ ನೀರಾವರಿ ಸೌಲಭ್ಯಕ್ಕಾಗಿ ಐ.ಪಿ.ಸೆಟ್ ಗಳಿಗೆ ಹೊಸದಾಗಿ ಯಾವಾಗಿನಿಂದ ವಿದ್ಯುತ್ ಸಂಪರ್ಕ ಒದಗಿಸಲಾಗುವುದು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಕೃಷಿ ಪಂಪ್‌ಸೆಟ್‌ಗಳಿಗಾಗಿ ವಿದ್ಯುತ್ ಸಂಪರ್ಕ ಕೋರಿ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಕಪ್ಪು ಹಾಗೂ ಬೂದು ತಾಲ್ಲೂಕುಗಳನ್ನು ಹೊರತು ಪಡಿಸಿ ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ನೀಡಲು ನಿರ್ಬಂಧ ಇರುವುದಿಲ್ಲ.

ಆ) ಪ್ರಸ್ತುತ ನೀರಾವರಿ ಪಂಪ್‌ಸೆಟ್‌ಗಳಿಗೆ ಹೊಸದಾಗಿ ಸ್ವಯಂ ಪರಿವರ್ತಕ ಹೊಂದುವ ಯೋಜನೆ ಎಂಬ ಹೊಸ ಯೋಜನೆ (Own Your Transformer) ಅಡಿಯಲ್ಲಿ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ.

ಮಂಡ್ಯ ನಗರದಲ್ಲಿ ಕುಡಿಯುವ ನೀರಿನ ವಿತರಣಾ ವ್ಯವಸ್ಥೆಯ ಆಧುನೀಕರಣದ ಬಗ್ಗೆ

10 (187) : ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ನಗರದಲ್ಲಿನ ಪ್ರಸ್ತುತ ಕುಡಿಯುವ ನೀರಿನ ಯೋಜನೆಯಲ್ಲಿನ ವಿತರಣಾ ವ್ಯವಸ್ಥೆಯನ್ನು ಬಲಪಡಿಸಿ ಆಧುನೀಕರಣಗೊಳಿಸಬೇಕಾದ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆಯೇ;